## 2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು

## ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.

**ದಿಃ 30.09.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಈ ದಾವೆಯಲ್ಲಿ 1(ಬಿ)ನೇ ವಾದಿಯಾಗಿದ್ದೇನೆ.

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ದಾವೆಗೆ ಸಂಬಂಧಿಸಿದಂತೆ ಅಸಲು ದಾವಾ ನಂ.166/2021 ರಲ್ಲಿನ ಆದೇಶ ಪುಟದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, ಅಸಲು ದಾವಾ ನಂ.166/2021 ರಲ್ಲಿನ ವಾದ ಪತ್ರ ಮತ್ತು ಪ್ರತಿವಾದ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.2 ಮತ್ತು 3 ಎಂದು, ಮ್ಯೂಟೇಶನ್ ರಜಿಸ್ಟರಿನ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ಕುಟುಂಬ ವ್ಯವಸ್ಥಾ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು, ತಹಶೀಲ್ದಾರವರಿಗೆ ನೀಡಿದ ಅರ್ಜಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.6 ಎಂದು, ಮ್ಯೂಟೇಶನ್ ರಜಿಸ್ಟರಿನ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.7 ಎಂದು, ಪಹಣಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.8 ಎಂದು, ಮ್ಯೂಟೇಶನ್ ರಜಿಸ್ಟರನ್ನು ಹಾಜರುಪಡಿಸಿದ್ದು ಅದನ್ನು ನಿಪಿ.9 ಎಂದು, ಮನೆಯ ಕರ ಆಕರಣೆಯ ಎರಡು ಯಾದಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.10 ಮತ್ತು 11 ಎಂದು,

ಪಹಣಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.12 ರಿಂದ 26 ಎಂದು, ದಿಃ 30/07/2008 ರ ಕ್ರಯಪತ್ರದ ಆನ್ ಲೈನ್ ದೃಢಿಕೃತ ಪತ್ರವನ್ನು ಹಾಜರಪಡಿಸಿದ್ದು ಅದನ್ನು ನಿಪಿ.27 ಎಂದು ಗುರುತಿಸಲಾಯಿತು.

(**ಪಾಟೀ ಸವಾಲುಃ ಪಾಟಿ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು ನೀಡಿ ಮುಂದೂಡಲಾಯಿತು).**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**